<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: 2017-18ನೇ ಸಾಲಿನ ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: ಮುಖ್ಯ ಸಂಪಾದಕರು, ಕರ್ನಾಟಕ ರಾಜ್ಯ ಕರ್ನಾಟಕ ಗ್ಯಾಸೆಟಿಯರ್ ಇಲಾಖೆ ಇವರ ಪತ್ರ ಸಂಖ್ಯೆ: ಕಗ್ಯಾಇ/ಇಎಸ್ ಟಿ/02/2017, ದಿನಾಂಕ: 04.04.2017

ಪ್ರಸ್ತಾವನೆ:

ಕರ್ನಾಟಕ ಗ್ಯಾಸೆಟಿಯರ್ ಇಲಾಖೆಗೆ 2017-18ನೇ ಸಾಲಿನ ಕಾರ್ಯಕ್ರಮಕ್ಕಾಗಿ ಲೆಕ್ಕ ಶೀರ್ಷಿಕೆ 3454-2-110-0-059 ಇತರೆ ಖರ್ಚುಗಳಡಿ ಇಲಾಖೆಗೆ 93.00 ಲಕ್ಷ ರೂ ಅನುದಾನ ಹಂಚಿಕೆಯಾಗಿದ್ದು, 2017-18 ನೇ ಸಾಲಿನ ಮುಂದುವರೆದ ಯೋಜನೆಗಳಿಗೆ ರೂ.20.00 ಲಕ್ಷ ಹಾಗೂ 2017-18ನೇ ಸಾಲಿನಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿದ ಹೊಸ ಯೋಜನೆಗಳಿಗೆ ರೂ. 73.00 ಲಕ್ಷಕ್ಕೆ ಕಾರ್ಯಕ್ರಮಗಳ ಪಟ್ಟಿಯನ್ನು ಸಿದ್ದಪಡಿಸಿ ಸಲ್ಲಿಸಿದ್ದು, ಈ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವಂತೆ ಮುಖ್ಯ ಸಂಪಾದಕರು ಇವರು ಮೇಲೆ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 09 ಕರಾಗೆ 2017**
**ಬೆಂಗಳೂರು, ದಿನಾಂಕ: 28.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಕರ್ನಾಟಕ ಗ್ಯಾಸೆಟಿಯರ್ ಇಲಾಖೆಗೆ 2017-18ನೇ ಸಾಲಿನ ಕ್ರಿಯಾ ಯೋಜನೆ ಮತ್ತು ಮುಂದುವರೆದ ಯೋಜನಾ ಕಾರ್ಯಕ್ರಮಗಳಿಗೆ ಅನುಬಂಧ 1 ಮತ್ತು 2 ರಲ್ಲಿ ಸೂಚಿಸಿರುವಂತೆ ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆಯನ್ನು ನೀಡಲಾಗಿದೆ.

**<u>ಷರತ್ತುಗಳು</u>**

1. 2016-17 ನೇ ಸಾಲಿನಲ್ಲಿ ಅನುಮೋದನೆಯಾದ ಹೊಸದಾಗಿ ಮಂಜೂರಾದ ಯೋಜನಾ ಕಾರ್ಯಕ್ರಮಗಳನ್ನು ಹಾಗೂ ಮುಂದುವರಿದ ಯೋಜನಾ ಕಾರ್ಯಕ್ರಮಗಳನ್ನು ಮಾತ್ರ ಮುಂದುವರೆಸಬೇಕು.
2. ಮುಂದುವರೆದ ಯೋಜನಾ ಕಾರ್ಯಕ್ರಮಗಳಲ್ಲಿ ಯಾವುದೇ ಹೊಸ ಘಟಕಗಳು ಅಥವಾ ಹೊಸ ಯೋಜನೆಗಳು ಒಳಗೊಂಡಿದ್ದಲ್ಲಿ ಅವುಗಳಿಗೆ ಪ್ರತ್ಯೇಕವಾದ ಪ್ರಸ್ತಾವನೆಗಳನ್ನು ಸಲ್ಲಿಸಿ ನಿಯಮಾನುಸಾರ ಮಂಜೂರಾತಿ ಪಡೆಯಬೇಕು.
3. ಹೊಸ ಸಂಸ್ಥೆಗಳಿಗೆ ಅಥವಾ ಅದೇ ಯೋಜನೆಯ ಹೊಸ ಪ್ರಕರಣಗಳಲ್ಲಿ ಒಳಗೊಂಡಿರುವ ಕೆಲಸಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಸಾಲ ಬಂಡವಾಳ ವೆಚ್ಚ ಸಹಾಯಧನ/ಸೋಡಿ ಮುಂತಾದವುಗಳ ಮಂಜೂರಾತಿ ಇವು ಆಯಾಯ ಬಾಬ್ತುಗಳಿಗೆ ಸಂಬಂಧಿಸಿದ ಪ್ರತ್ಯಾಯೋಜಿತ ಅಧಿಕಾರಗಳ ಪರಿಮಿತಿಯಲ್ಲಿರಬೇಕು.
4. ಆರ್ಥಿಕ ಇಲಾಖೆಯ ಮಿತವ್ಯಯ ಆದೇಶಗಳಿಗೆ ಒಳಪಡುವ ಸಿಬ್ಬಂದಿ ಸೃಜನೆ, ವಾಹನ ಮತ್ತು ಯಂತ್ರ ಸಾಮಗ್ರಿ ಖರೀದಿ, ಹೊಸ ಕಛೇರಿ ತೆರೆಯುವುದು, ಹೊಸ ಯೋಜನೆಗಳಿಗೆ ಮಂಜೂರಾತಿ, ಇವುಗಳಿಗೆ ಪ್ರತ್ಯೇಕವಾಗಿ ಆರ್ಥಿಕ ಇಲಾಖೆಯ ಹಾಗೂ ಯೋಜನಾ ಇಲಾಖೆಯ ಅನುಮೋದನೆಯನ್ನು ಪಡೆಯಲು ಪ್ರಸ್ತಾವನೆಗಳನ್ನು ಸಲ್ಲಿಸುವುದು.

5. ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಲು ಜವಾಬ್ದಾರರಾದ ಅಧಿಕಾರಿಗಳು ಅವರಿಗೆ ನೀಡಲಾದ ಆರ್ಥಿಕ ಅಧಿಕಾರಕ್ಕೆ ಒಳಪಟ್ಟು ಯೋಜನಾ ಕಾರ್ಯಕ್ರಮಗಳನ್ನು ಕಾರ್ಯರೂಪಕ್ಕೆ ತರತಕ್ಕದ್ದು.
6. 1999ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮವನ್ನು ಹಾಗೂ ಅದರ ನಿಯಮಗಳು 2000 ವನ್ನು ಕಡ್ಡಾಯವಾಗಿ ಪಾಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2017 ದಿನಾಂಕ: 05.04.2017 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

G. Annapurna

(ಜಿ.ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)

ಇವರಿಗೆ :-

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ), (ಇ&ಎಸ್ಎಸ್ಎ), (ಎ&ಇ) ಕರ್ನಾಟಕ, ಬೆಂಗಳೂರು-560001
2) ಮುಖ್ಯ ಸಂಪಾದಕರು ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಕಾವೇರಿ ಭವನ, ಬೆಂಗಳೂರು.
3) ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ, ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5) ನಿರ್ದೇಶಕರು ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7), ವಿಧಾನ ಸೌಧ, ಬೆಂಗಳೂರು.
7) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು
9) ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂ: ಕಸಂವಾ 09 ಕರಾಗೆ 2017, ದಿ: 28.04.2017

## ಅನುಬಂಧ-1

### 2017-18ನೇ ಸಾಲಿನ ಮುಂದುವರೆದ ಯೋಜನೆ

(ಲಕ್ಷ ರೂ.ಗಳಲ್ಲಿ)

| | | |
|---|---|---|
| 1. | **ಜಿಲ್ಲಾ ಗ್ಯಾಸೆಟಿಯರ್** | |
| | 1) ಬೀದರ್ ಜಿಲ್ಲಾ ಗ್ಯಾಸೆಟಿಯರ್ ಸಂಪಾದನೆ, ಪುಟವಿನ್ಯಾಸ ಹಾಗೂ ಮುದ್ರಣ | 4.00 |
| 2. | **ತಾಲ್ಲೂಕು ಗ್ಯಾಸೆಟಿಯರ್** | |
| | 1) ದಾವಣಗೆರೆ 2) ಹರಿಹರ 3) ಹರಪನಹಳ್ಳಿ 4) ಹಿರಿಯೂರು 5) ಹೊಸದುರ್ಗ 6) ಹೊಳಲ್ಕೆರೆ ತಾಲೂಕು ಗ್ಯಾಸೆಟಿಯರ್‌ಗಳ ಸಂಪಾದನೆ, ಪುಟವಿನ್ಯಾಸ ಹಾಗೂ ಮುದ್ರಣ | 10.0 |
| 3. | **ವಿಶೇಷ ಪ್ರಕಟಣೆ** | |
| | ಕರ್ನಾಟಕ ಕೈಪಿಡಿ ಸಂಪುಟದ ಬಾಕಿ ಉಳಿದ ಮುದ್ರಣ ವೆಚ್ಚದ ಪಾವತಿ | 6.00 |
| | **ಒಟ್ಟು** | **20.00** |

G. Annapurna

(ಜಿ.ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)

ಸರ್ಕಾರದ ಆದೇಶ ಸಂ: ಕಸಂವಾ 09 ಕರಾಗೆ 2017, ದಿ: 28.04.2017

## ಅನುಬಂಧ - 2

## 2017-18ನೇ ಸಾಲಿನ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳು

(ಲಕ್ಷ ರೂ.ಗಳಲ್ಲಿ)

| | | |
|---|---|---|
| 1 | **ಜಿಲ್ಲಾ ಗ್ಯಾಸೆಟಿಯರ್ ಪ್ರಕಟಣೆ** | |
| | 1) ಬಾಗಲಕೋಟೆ ಜಿಲ್ಲಾ ಗ್ಯಾಸೆಟಿಯರ್ ರಚನೆ ಮತ್ತು ಸಂಪಾದನೆ | 10.00 |
| | 2) ಬೆಂಗಳೂರು ಜಿಲ್ಲಾ ಗ್ಯಾಸೆಟಿಯರ್ ರಚನೆ ಮತ್ತು ಸಂಪಾದನೆ 2 ಸಂಪುಟಗಳು | |
| 2 | **ತಾಲೂಕು ಗ್ಯಾಸೆಟಿಯರ್ ಪ್ರಕಟಣೆ** | |
| | 1) ಚನ್ನಗಿರಿ 2) ಹೊನ್ನಾಳಿ 3) ಜಗಳೂರು 4) ಚಿತ್ರದುರ್ಗ 5) ಚಳ್ಳಕೆರೆ 6) ಮೊಳಕಾಲ್ಮೂರು ತಾಲ್ಲೂಕು ಗ್ಯಾಸೆಟಿಯರ್‌ಗಳ ರಚನೆ ಮತ್ತು ಸಂಪಾದನೆ | 5.00 |
| 3 | **ಪುನರ್ ಮುದ್ರಣ ಯೋಜನೆ** | |
| | 1) Historical Sketches of the South of India in an attempt to trace the History of Mysore (by Mark Wilks) Edited by Murray Hammick ಸಂಪುಟದ ಮರು ಮುದ್ರಣ 2 ಸಂಪುಟಗಳು | 45.00 |
| | 2) Karnataka through the Ages Edited by R R Diwakar. ಸಂಪುಟದ ಮರುಮುದ್ರಣ 2 ಸಂಪುಟಗಳು | |
| | 3) ಕರ್ನಾಟಕ ಕೈಪಿಡಿ ಪುನರ್ ಮುದ್ರಣ (ಡಿ.ವಿ.ಡಿ. ಸೇರಿ) ರಾಜ್ಯದ ಜಿಲ್ಲಾ ಹಾಗೂ ತಾಲೂಕು ಗ್ರಂಥಾಲಯಗಳಿಗೆ ಉಚಿತವಾಗಿ ಪೂರೈಸುವ ಸಲುವಾಗಿ. 2 ಸಂಪುಟಗಳಲ್ಲಿ | |
| 4 | **ಗಣಕ ಯಂತ್ರ , ಸ್ಯಾನರ್ ಹಾಗೂ ಪ್ರಿಂಟರ್ ಖರೀದಿ** | |
| | 1) Computer -3 (under Buyback Scheme) | 3.00 |
| | 2) Printer - 1 | |
| | 3) Scanner -1 | |
| 5 | **ಹೊರಗುತ್ತಿಗೆ ನೌಕರರ ವೇತನದ ಸಲುವಾಗಿ** | |
| | ಇಲಾಖೆಯಲ್ಲಿ ಸಂಪಾದಕ ವರ್ಗದವರ ಕೊರತೆ ಇರುವುದರಿಂದ ಮೇಲ್ಕಂಡ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಒಂದು ವರ್ಷದ ಮಟ್ಟಿಗೆ ಈ ಕೆಳಗಿನ ಹುದ್ದೆಗಳಿಗೆ ಹೊರ ಗುತ್ತಿಗೆ ನೌಕರರ ವೇತನ ಪಾವತಿ ಸಲುವಾಗಿ.<br>ಸಂಪಾದಕರು-2 (ಪ್ರತಿ ತಿಂಗಳ ವೇತನ ರೂ. 20000/-)<br>ಅನ್ವೇಷಕರು- 2 (ಪ್ರತಿ ತಿಂಗಳ ವೇತನ ರೂ.15000/-)<br>ಡಾಟಾ ಎಂಟ್ರಿ ಆಪರೇಟರ್-01 (ಪ್ರತಿ ತಿಂಗಳ ವೇತನ ರೂ.14500/-) | 10.00 |
| | **ಒಟ್ಟು** | 73.00 |

G. Annapurna

(ಜಿ.ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)